# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಶುಭ, ಪ್ರಸ್ತುತ ಸದಸ್ಯರು, ಶ್ರೀಮತಿ ಗೌರಮ್ಮ, ಹಿಂದಿನ ಸದಸ್ಯರು ಹಾಗೂ ಶ್ರೀಮತಿ ಜ್ಯೋತಿ, ಹಿಂದಿನ ಸದಸ್ಯರು, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ರವರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ ರವರ ಪತ್ರ ಸಂಖ್ಯೆ:ಪರಿಷತ್/ಸಿಆರ್/72/2016-17, ದಿನಾಂಕ:04.06.2018.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 554 ಗ್ರಾಪಂಅ 2018, ದಿನಾಂಕ:04.07.2019.
3. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:32127/2019 ಮತ್ತು 32128-129/2019 (ಎಲ್‌ಬಿ-ಆರ್‌ಇಎಸ್) ರಲ್ಲಿ ದಿನಾಂಕ:10.02.2020 ರಂದು ನೀಡಿರುವ ಆದೇಶ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ ರವರ ಪತ್ರ ಸಂಖ್ಯೆ:ಪರಿಷತ್/ಸಿಆರ್/47/2019-20, ದಿನಾಂಕ:02.03.2020.
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ರವರ ಪತ್ರ ಸಂಖ್ಯೆ:ಮುಗ್ರಾಪಂ/91/2019-20, ದಿನಾಂಕ:26.02.2020.
6. ಶ್ರೀ ಪ್ರಕಾಶ್ ಟಿ. ಹೆಬ್ಬಾರ್, ವಕೀಲರು, ಇವರು ಸರ್ಕಾರಕ್ಕೆ ಬರೆದಿರುವ ಮನವಿ ದಿನಾಂಕ:26.02.2020.
7. ಸರ್ಕಾರದ ಕಾರಣ ಕೇಳುವ ನೋಟೀಸ್ ದಿನಾಂಕ:09.06.2020, 24.06.2020, 20.08.2020, 26.08.2020, 25.11.2020, 03.03.2021.

**ಪ್ರಸ್ತಾವನೆ:**

ಶ್ರೀಮತಿ ಶುಭ, ಉಪಾಧ್ಯಕ್ಷರು, ಶ್ರೀಮತಿ ಗೌರಮ್ಮ, ಸದಸ್ಯರು ಹಾಗೂ ಶ್ರೀಮತಿ ಜ್ಯೋತಿ, ಸದಸ್ಯರು, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ, ಇವರುಗಳು ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಕಛೇರಿಗೆ ಬೀಗ ಹಾಕಿ, ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿರುವ ಹಿನ್ನೆಲೆಯಲ್ಲಿ ವಿಚಾರಣೆ ನಡೆಸಲು ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ ರವರು ಪತ್ರ ಸಂಖ್ಯೆ:ಪರಿಷತ್:ಸಿಆರ್:72:2016-17, ದಿನಾಂಕ:04.06.2018 ರಂದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಅದರಂತೆ ಶ್ರೀಮತಿ ಶುಭ, ಉಪಾಧ್ಯಕ್ಷರು, ಶ್ರೀಮತಿ ಗೌರಮ್ಮ, ಸದಸ್ಯರು ಹಾಗೂ ಶ್ರೀಮತಿ ಜ್ಯೋತಿ, ಸದಸ್ಯರು, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ರವರಿಗೆ ದಿನಾಂಕ:03.07.2018 ರಂದು ಕಾರಣ ಕೇಳುವ ನೋಟೀಸ್ ಜಾರಿ ಮಾಡಿ, ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಸದರಿಯವರುಗಳ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು.

ಸದರಿಯವರುಗಳು ದಿನಾಂಕ:17.07.2018 ರಂದು ಸಮಜಾಯಿಷಿಯನ್ನು ನೀಡಿರುತ್ತಾರೆ. ಸಮಜಾಯಿಷಿಯಲ್ಲಿ ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶ್ರೀ ರಮೇಶ್ ರವರು ಗ್ರಾಮ ಪಂಚಾಯಿತಿಯಲ್ಲಿ ಕಾರ್ಯಭಾರ ವಹಿಸಿಕೊಂಡ ನಂತರ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಸುಜಾತ ವೈ. ಚಿಕ್ಕಹೆಗಡೆ ಮತ್ತು ಅಧಿಕಾರಿಗಳು ಸೇರಿಕೊಂಡು ಗ್ರಾಮ ಪಂಚಾಯಿತಿಯಲ್ಲಿ ಒಂದು ಕೋಟಿಗೂ ಹೆಚ್ಚು ಮೌಲ್ಯದ ಅಕ್ರಮಗಳನ್ನು ಮಾಡಿದ್ದು, ಈ ಬಗ್ಗೆ ಗ್ರಾಮ ಪಂಚಾಯಿತಿ ಸದಸ್ಯರು, ಸಾಮಾನ್ಯ ಸಭೆಯಲ್ಲಿ ಆಕ್ಷೇಪಣೆ ಮಾಡಿದ್ದರೂ ಸಹ ಈ ವಿಚಾರವನ್ನು ಸಭಾ ನಡವಳಿಯಲ್ಲಿ ನಮೂದಿಸಿರುತ್ತಿರಲಿಲ್ಲ. ಪಂಚಾಯಿತಿಯಲ್ಲಿ ನಡೆಯಬೇಕಾಗಿದ್ದ, ಜಮಾಬಂದಿಯನ್ನು ಎರಡು ವರ್ಷಗಳಲ್ಲಿ ನಡೆಸಿರುವುದಿಲ್ಲ. ದಿನಾಂಕ:24.02.2016 ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ ರವರಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಅಧ್ಯಕ್ಷರ ಅಕ್ರಮಗಳ ಬಗ್ಗೆ ದೂರು ನೀಡಲಾಗಿತ್ತು. ಈ ಉದ್ದೇಶಕ್ಕಾಗಿ ತನ್ನ ಪತಿಯವರ ವಿರುದ್ಧ ಆಧಾರ ರಹಿತ ಎಫ್.ಐ.ಆರ್. ದಾಖಲಿಸಿ, ಎದರಿಸುವ ಕೆಲಸ ಮಾಡಿರುತ್ತಾರೆ. ತಮ್ಮ ಮೇಲೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿ ಅಧ್ಯಕ್ಷರು ಉದ್ದೇಶ ಪೂರ್ವಕವಾಗಿ ಆರೋಪ ಮಾಡಿರುವುದಾಗಿ, ತಿಳಿಸಿರುತ್ತಾರೆ.

ದಿನಾಂಕ:16.01.2019 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ಪ್ರಕರಣವನ್ನು ವಿಚಾರಣೆಗೆ ತೆಗೆದುಕೊಳ್ಳಲಾಗಿತ್ತು. ವಿಚಾರಣೆಯಲ್ಲಿ ಶ್ರೀ ಮಹೇಶ್‌ಕುಮಾರ್ ವಿ. ಸಹಾಯಕ ನಿರ್ದೇಶಕರು, ಆನೇಕಲ್ ತಾಲ್ಲೂಕು ಪಂಛಾಯಿತಿ, ಅಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶ್ರೀ ರಮೇಶ್, ಶ್ರೀ ಶ್ರೀನಿವಾಸಯ್ಯ, ಕಾರ್ಯದರ್ಶಿ, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ದೂರುದಾರರ ಪರವಾಗಿ ಶ್ರೀಮತಿ ವೈ. ಸುಜಾತ, ಮಾಜಿ ಅಧ್ಯಕ್ಷರು, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ ಹಾಗೂ ಪ್ರತಿವಾದಿ ಸದಸ್ಯರು ಹಾಜರಿರುತ್ತಾರೆ. ಅಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶ್ರೀ ರಮೇಶ್ ರವರು ಉಪಾಧ್ಯಕ್ಷರ ಗಂಡ ಶ್ರೀ ಶ್ರೀಧರ್ ರವರು ತನಗೆ ನಿಂದಿಸಿ ತೊಂದರೆ ಕೊಟ್ಟಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ಮತ್ತು (6) ರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ ರವರ ದಿನಾಂಕ:26.02.2020 ರ ಪತ್ರ ಮತ್ತು ಶ್ರೀ ಪ್ರಕಾಶ್ ಟಿ. ಹೆಬ್ಬಾರ್, ವಕೀಲರು ರವರ ಪತ್ರ ದಿನಾಂಕ:27.02.2020 ಹಾಗೂ ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ ರವರು ದಿನಾಂಕ:02.03.2020 ರಂದು ಸರ್ಕಾರಕ್ಕೆ ಬರೆದಿರುವ ಪತ್ರದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 554 ಗ್ರಾಪಂಅ 2018, ದಿನಾಂಕ:04.07.2019 ಅನ್ನು ಪ್ರಶ್ನಿಸಿ, ಭಾದಿತ ವ್ಯಕ್ತಿಗಳಾದ ಶ್ರೀಮತಿ ಶುಭ, ಉಪಾಧ್ಯಕ್ಷರು, ಶ್ರೀಮತಿ ಗೌರಮ್ಮ, ಸದಸ್ಯರು ಹಾಗೂ ಶ್ರೀಮತಿ ಜ್ಯೋತಿ, ಸದಸ್ಯರು, ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಪಿಟಿಶನ್ ಸಂಖ್ಯೆ:32127-32129/2019 ಅನ್ನು ದಾಖಲಿಸಿದ್ದು, ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:10.02.2020 ರಂದು ನೀಡಿರುವ ಆದೇಶದಲ್ಲಿ ದಿನಾಂಕ:04.07.2019 ರಲ್ಲಿ ಹೊರಡಿಸಿರುವ ಸರ್ಕಾರದ ಆದೇಶವನ್ನು ರದ್ದುಪಡಿಸಿ ಮತ್ತು ಈ ಪ್ರಕರಣದಲ್ಲಿ ಒಂದು ತಿಂಗಳೊಳಗಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ವಾದ/ಪ್ರತಿವಾದಗಳನ್ನು ಆಲಿಸಿ, ಹೊಸದಾಗಿ ಆದೇಶ ಹೊರಡಿಸಬೇಕೆಂದು ತಿಳಿಸಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (7) ರಂತೆ ಸದರಿ ಪ್ರಕರಣದ ವಿಚಾರಣೆಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ನಡೆಸಲು ತೀರ್ಮಾನಿಸಿ, ಅದರಂತೆ ದಿನಾಂಕ:09.06.2020, 24.06.2020, 20.08.2020, 26.08.2020, 25.11.2020, 03.03.2021 ರಂದು ವಿಚಾರಣಾ ತಿಳುವಳಿಕೆ ಪತ್ರವನ್ನು ಜಾರಿಗೊಳಿಸಲಾಯಿತು ಹಾಗೂ ದಿನಾಂಕ:02.09.2020, 02.12.2020, 17.12.2020, 06.01.2021, 13.01.2021, 28.01.2021 ಮತ್ತು 15.03.2021 ರಂದು ವಿಚಾರಣೆಗೆ ತೆಗೆದುಕೊಳ್ಳಲಾಯಿತು.

ವಿಚಾರಣೆಯಲ್ಲಿ ಸರ್ಕಾರದ ಪರವಾಗಿ, ಶ್ರೀ ಎ. ಶ್ರೀನಿವಾಸಯ್ಯ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2, ಶ್ರೀ ಎಸ್. ರಮೇಶ್, ಅಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಮಾಜಿ ಉಪಾಧ್ಯಕ್ಷರು ಹಾಗೂ ಪ್ರಸ್ತುತ ಸದಸ್ಯರಾದ ಶ್ರೀಮತಿ ಶುಭ ಮತ್ತು ಮಾಜಿ ಸದಸ್ಯರುಗಳಾದ ಶ್ರೀಮತಿ ಗೌರಮ್ಮ ಮತ್ತು ಶ್ರೀಮತಿ ಜ್ಯೋತಿ, ರವರ ಪರವಾಗಿ ಶ್ರೀ ಎಂ. ರವಿಕುಮಾರ್, ವಕೀಲರು, ಹಾಜರಿರುತ್ತಾರೆ. ವಿಚಾರಣೆ ಸಮಯದಲ್ಲಿ ಬೆಂಗಳೂರು ನಗರ ಜಿಲ್ಲೆ, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಕಛೇರಿಗೆ ಬೀಗ ಹಾಕಿ, ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿರುವ ಹಿನ್ನೆಲೆಯಲ್ಲಿ ಸಿ.ಡಿ.ಯನ್ನು ವೀಕ್ಷಿಸಲಾಯಿತು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) (vi) ರಡಿ ಅವನು ಮಾಜಿ ಅಧ್ಯಕ್ಷ ಅಥವಾ ಮಾಜಿ ಉಪಾಧ್ಯಕ್ಷ ಅಥವಾ ಮಾಜಿ ಸದಸ್ಯನಾಗಿ ದುರ್ನಡತೆ, ಅನುದಾನ ದುರುಪಯೋಗ ಮತ್ತು ಇನ್ನಿತರ ಯಾವುದೇ ಪ್ರಕರಣದಡಿ ಆರೋಪಿತನಾಗಿದ್ದು, ತನಿಖೆಯಲ್ಲಿ ಆರೋಪ ಸಾಬೀತಾದರೆ ತೆಗೆದು ಹಾಕಲು ಅವಕಾಶ ಕಲ್ಪಿಸಲಾಗಿದೆ.

ವಿಚಾರಣೆ ಸಮಯದಲ್ಲಿ ಬೆಂಗಳೂರು ನಗರ ಜಿಲ್ಲೆ, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಕಛೇರಿಗೆ ಬೀಗ ಹಾಕಿ, ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿರುವ ಹಿನ್ನೆಲೆಯಲ್ಲಿ ಸಿ.ಡಿ.ಯನ್ನು ವೀಕ್ಷಿಸಲಾಗಿ, ಗ್ರಾಮ ಪಂಚಾಯಿತಿ, ಕಛೇರಿಗೆ ಬೀಗ ಹಾಕಿ, ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿರುವುದು ಕಂಡು ಬಂದಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಈ ಪ್ರಕರಣದಲ್ಲಿ 7 ಬಾರಿ ವಿಚಾರಣೆ ನಡೆಸಲಾಗಿದೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮಾಜಿ ಉಪಾಧ್ಯಕ್ಷರು ಹಾಗೂ ಪ್ರಸ್ತುತ ಸದಸ್ಯರಾದ ಶ್ರೀಮತಿ ಶುಭ, ಹಿಂದಿನ ಸದಸ್ಯರುಗಳಾದ ಶ್ರೀಮತಿ ಗೌರಮ್ಮ, ಹಾಗೂ ಶ್ರೀಮತಿ ಜ್ಯೋತಿ, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ರವರ ಸಮಜಾಯಿಷಿಯನ್ನು ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ ರವರ ವರದಿಯನ್ನು ಪರಿಶೀಲಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಶ್ರೀಮತಿ ಶುಭ, ಇವರು ಪ್ರಸ್ತುತ ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಸದಸ್ಯರಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) (vi) ರನ್ವಯ ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಲು ನಿರ್ಣಯಿಸಿದೆ.

ಮುಂದುವರೆದು, ಶ್ರೀಮತಿ ಗೌರಮ್ಮ, ಸದಸ್ಯರು ಹಾಗೂ ಶ್ರೀಮತಿ ಜ್ಯೋತಿ, ಸದಸ್ಯರು, ಇವರುಗಳು ಮಾಜಿ ಸದಸ್ಯರುಗಳಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರಡಿ ಸದರಿ ಅಧಿನಿಯಮದ ಪ್ರಕರಣ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಲು ನಿರ್ಣಯಿಸಿದೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/554/ಗ್ರಾಪಂಅ/2018**
**ಬೆಂಗಳೂರು, ದಿನಾಂಕ:04-06-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಶುಭ, ಇವರು ಪ್ರಸ್ತುತ ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ ಸದಸ್ಯರಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) (vi) ರನ್ವಯ ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ.

ಮುಂದುವರೆದು, ಶ್ರೀಮತಿ ಗೌರಮ್ಮ ಮತ್ತು ಶ್ರೀಮತಿ ಜ್ಯೋತಿ, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಇವರುಗಳು ಮಾಜಿ ಸದಸ್ಯರುಗಳಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರಡಿ ಸದರಿ ಅಧಿನಿಯಮದ ಪ್ರಕರಣ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 04/06/21.
(ನವೀನ್‌ಕುಮಾರ್ ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ,(ಜಿ.ಪಂ.)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

4/6/21

<u>ಗೆ:</u>

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಆನೇಕಲ್, ಬೆಂಗಳೂರು ನಗರ ಜಿಲ್ಲೆ.
3) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
4) ಸಂಬಂಧಿಸಿದವರಿಗೆ (ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಆನೇಕಲ್, ಬೆಂಗಳೂರು ನಗರ ಜಿಲ್ಲೆ ರವರ ಮುಖಾಂತರ)
5) ಶ್ರೀಮತಿ ಶುಭ, ಸದಸ್ಯರು, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
6) ಶ್ರೀಮತಿ ಜ್ಯೋತಿ, ಮಾಜಿ ಸದಸ್ಯರು, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
7) ಶ್ರೀಮತಿ ಗೌರಮ್ಮ, ಮಾಜಿ ಸದಸ್ಯರು, ಮುತ್ತಾನಲ್ಲೂರು ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
8) ಗಣಕ ಕೋಶ.
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.